ಇಲಾಖೆ / ವಿಷಯ : DEPARTMENT / SUBJECT: ಇತರ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE 21/3/2020

# ಕಮಲ್ ಸರ್ಕಾರ ಪತನ

## ವಿಶ್ವಾಸಮತ ಯಾಚಿಸದೇ ರಾಜೀನಾಮೆ

ಭೋಪಾಲ: ಮಧ್ಯಪ್ರದೇಶದಲ್ಲಿ 15 ತಿಂಗಳ ಕಾಲ ಆಡಳಿತ ನಡೆಸಿದ್ದ ಮುಖ್ಯಮಂತ್ರಿ ಕಮಲ್‌ನಾಥ್ ವಿಶ್ವಾಸಮತ ಸಾಬೀತು ಮಾಡುವ ಮುನ್ನವೇ ರಾಜೀನಾಮೆ ನೀಡಿದ್ದಾರೆ. ಮತ್ತೊಮ್ಮೆ ಬಿಜೆಪಿ ನಾಯಕ ಶಿವರಾಜ್ ಸಿಂಗ್ ಚೌಹಾಣ್ ಸರ್ಕಾರ ರಚಿಸುವುದು ಖಚಿತವಾಗಿದೆ.

ಗುರುವಾರ ತಡರಾತ್ರಿ ಸ್ಪೀಕರ್ ಪ್ರಜಾಪತಿ ಅವರು 16 ಬಂಡಾಯ ಶಾಸಕರ ರಾಜೀನಾಮೆ ಅಂಗೀಕರಿಸಿದ್ದರಿಂದಾಗಿ ಕಮಲ್‌ನಾಥ್ ಸರ್ಕಾರ ಅಲ್ಪಮತಕ್ಕೆ ಕುಸಿದಿತ್ತು. ಹೀಗಾಗಿ, ಶುಕ್ರವಾರ ಮಧ್ಯಾಹ್ನ ಪತ್ರಿಕಾಗೋಷ್ಠಿ ನಡೆಸಿ ರಾಜೀನಾಮೆ ನಿರ್ಧಾರ ಪ್ರಕಟಿಸಿದರು.

ಬಿಜೆಪಿ ವಿರುದ್ಧವೂ ವಾಗ್ದಾಳಿ ನಡೆಸಿದ ಅವರು, ಬಿಜೆಪಿ ನಾಯಕ ಜ್ಯೋತಿರಾದಿತ್ಯ ಸಿಂಧಿಯಾ ಕೂಡ ಸರ್ಕಾರ ಪತನಕ್ಕೆ ಕಾರಣರು ಎಂದಿದ್ದಾರೆ. ಸರ್ಕಾರ ರಚನೆಯಾದ ಮೊದಲ ದಿನದಿಂದಲೂ ಬಿಜೆಪಿ, ಇನ್ನಿಲ್ಲದ ಷಡ್ಯಂತ್ರ ಮಾಡಿದೆ ಎಂದು ಆರೋಪಿಸಿದರು.

15 ತಿಂಗಳ ಅವಧಿಯಲ್ಲಿ ತಾವು ಹಲವು ಬಾರಿ ತಮ್ಮ ನೇತೃತ್ವದ ಸರ್ಕಾರಕ್ಕೆ ಇದ್ದ ಬಹುಮತವನ್ನು ಸಾಬೀತುಮಾಡಿದ್ದಾಗಿ ಹೇಳಿದ್ದಾರೆ. ಆದರೆ ಸರ್ಕಾರವನ್ನು ಬಿಜೆಪಿ ಪತನಗೊಳಿಸಿತು. 'ಅಧಿಕಾರಕ್ಕೆ ಬಂದಕೂಡಲೇ ರೈತರ ಸಾಲ ಮನ್ನಾ ಮಾಡಿದೆ. ಸರ್ಕಾರ ಪತನಗೊಳಿಸುವ ಮೂಲಕ ರೈತರಿಗೆ ಬಿಜೆಪಿ ಮೋಸ ಮಾಡಿದೆ. ಚುನಾವಣೆ ಪ್ರಚಾರ ವೇಳೆ 400 ವಾಗ್ದಾನ ಮಾಡಲಾಗಿತ್ತು. ಇವುಗಳನ್ನು ಈಡೇರಿಸಲಾಗಿದೆ' ಎಂದಿದ್ದಾರೆ. ವಿಚಿತ್ರವೆಂದರೆ ಕರ್ನಾಟಕ ನಂತರ ಕಾಂಗ್ರೆಸ್ ಮಧ್ಯಪ್ರದೇಶವನ್ನೂ ಕಳೆದುಕೊಂಡಂತಾಯಿತು.

ಉವಾ 21/3/20



### ಶಿವರಾಜ್ ಸಿಂಗ್ ಚೌಹಾಣ್ ನೇತೃತ್ವ?

ಶೀಘ್ರದಲ್ಲಿ ಅಸ್ತಿತ್ವಕ್ಕೆ ಬರಲಿರುವ ಬಿಜೆಪಿ ನೇತೃತ್ವದ ಸರ್ಕಾರಕ್ಕೆ ಮಾಜಿ ಮುಖ್ಯಮಂತ್ರಿ ಶಿವರಾಜ್ ಸಿಂಗ್ ಚೌಹಾಣ್ ನೇತೃತ್ವ ವಹಿಸುವ ಸಾಧ್ಯತೆ ಇದೆ. ಈ ಬಗ್ಗೆ ಬಿಜೆಪಿ ವರಿಷ್ಠರೂ ಒಲವು ಹೊಂದಿದ್ದಾರೆ. ಬಿಜೆಪಿ ನಾಯಕರಾಗಿರುವ ನರೇಂದ್ರ ಸಿಂಗ್ ತೋಮರ್, ನರೋತ್ತಮ್ ಮಿಶ್ರಾ ಹೆಸರೂ ಕೇಳಿ ಬರುತ್ತಿದೆ.